# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | **ಡಾ|| ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು)** |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **310** |
| ಉತ್ತರಿಸಬೇಕಾದ ದಿನಾಂಕ | : | 13.08.2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ/ಪಂಗಡ ಮತ್ತು ಪ್ರವರ್ಗ-1ರಲ್ಲಿ ಬರುವ ಅಲೆಮಾರಿ ಸಮುದಾಯಗಳಿಗೆ ವಿವಿಧ ವಸತಿ ಯೋಜನೆಗಳ ಅನ್ವಯ ಇಲ್ಲಿಯವರೆಗೆ ಎಷ್ಟು ವಸತಿಗಳನ್ನು ಒದಗಿಸಲಾಗಿದೆ;(ವಿವರ ನೀಡುವುದು). | ರಾಜೀವ್ ಗಾಂಧಿ ವಸತಿ ನಿಗಮದಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರಲ್ಲಿ ಬರುವ ಅಲೆಮಾರಿ ಸಮುದಾಯದ ಫಲಾನುಭವಿಗಳಿಗೆ ದೇವರಾಜ ಅರಸು ವಸತಿ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ. ಅಲ್ಲದೇ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅಲೆಮಾರಿ ಸಮುದಾಯಗಳಿಗೆ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. 2010-11ನೇ ಸಾಲಿನಿಂದ ಈವರೆವಿಗೂ ಮಂಜೂರಾದ ಮನೆಗಳ ವಿವರ ಈ ಕೆಳಗಿನಂತಿದೆ. |

| ಕ್ರ. ಸಂ. | ಯೋಜನೆ ಮತ್ತು ಇಲಾಖೆ | ಮಂಜೂರಾದ ಮನೆಗಳ ವಿವರ |
|---|---|---|
| 01 | ರಾಜೀವ್ ಗಾಂಧಿ ವಸತಿ ನಿಗಮದ ದೇವರಾಜ ಅರಸು ವಸತಿ ಯೋಜನೆ ಯಲ್ಲಿ ಪರಿಶಿಷ್ಟ ಜಾತಿ/ಪಂಗಡದ ಅಲೆಮಾರಿಗಳಿಗೆ | 684 |
| 02 | ರಾಜೀವ್ ಗಾಂಧಿ ವಸತಿ ನಿಗಮದ ದೇವರಾಜ ಅರಸು ವಸತಿ ಯೋಜನೆ ಪ್ರವರ್ಗ-1 ರ ಅಲೆಮಾರಿಗಳಿಗೆ | 36,195 |
| 03 | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಸಮುದಾಯಗಳ ಅಭಿವೃದ್ಧಿ ನಿಗಮದಲ್ಲಿನ ವಸತಿ ಯೋಜನೆ | ಎಸ್.ಸಿ.- 5,021 |
| | | ಎಸ್.ಟಿ.-995 |
| 04 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ವಸತಿ ಯೋಜನೆ | 10,860 |
| | **ಒಟ್ಟು** | **53,755** |

| | | |
|---|---|---|
| ಆ) | ಅಲೆಮಾರಿ ಸಮುದಾಯದವರು ಬಯಲು ಪ್ರದೇಶಗಳಲ್ಲಿ/ಕೊಳಚೆ ಪ್ರದೇಶಗಳಲ್ಲಿ ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ ವಸತಿ ರಹಿತರಾಗಿ ಜೀವನ | ಮೇಲಿನಂತೆ ರಾಜೀವ್ ಗಾಂಧಿ ವಸತಿ ನಿಗಮದಿಂದ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದ್ದು, ಸದರಿ ಯೋಜನೆಗಳಡಿ ಮಂಜೂರು ಮಾಡಲಾದ ಮನೆಗಳಿಗೆ ಅವರು ಹೊಂದಿದ ನಿವೇಶನಗಳಿಗೆ ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಪಂಚಾಯತಿ ಮತ್ತು ನಗರ ಪ್ರದೇಶದಲ್ಲಿ ಸ್ಥಳೀಯ ಸಂಸ್ಥೆಗಳ ಮೂಲಕ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನ ಆಯವ್ಯಯ ಕಂಡಿಕೆ-206ರ ಘೋಷಣೆಯಲ್ಲಿ |

| | | |
|---|---|---|
| | ನಡೆಸುತ್ತಿರುವುದಕ್ಕೆ ಪರಿಹಾರವಾಗಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಕಾಲೋನಿಗಳ ಸಮಗ್ರ ಅಭಿವೃದ್ಧಿಗಾಗಿ ರೂ.100.00ಕೋಟಿಗಳ ಅನುದಾನವನ್ನು ಒದಗಿಸಲಾಗುವುದೆಂದು ಘೋಷಿಸಲಾಗಿರುತ್ತದೆ.<br><br>ಅದರಂತೆ ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 602 ಬಿಎಂಎಸ್ 2025, ದಿನಾಂಕ:31.07.2025ನ್ನು ಹೊರಡಿಸಿದ್ದು, ಸದರಿ ಆದೇಶದಲ್ಲಿ ಪ್ರಸಕ್ತ ಸಾಲಿನಲ್ಲಿ ರೂ.30.00ಕೋಟಿ ಅನುದಾನ ಒದಗಿಸಿದ್ದು, ಒದಗಿಸಿರುವ ಅನುದಾನಕ್ಕೆ ಸೀಮಿತವಾಗಿ ಅಲೆಮಾರಿ/ಅರೆಅಲೆಮಾರಿ ಕಾಲೋನಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ ಎಂದು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪತ್ರ ಸಂಖ್ಯೆ:ಹಿಂವಕಇ/ಸ-09/ವಿಪ/ಸಿಆರ್-01/2025-26, ದಿನಾಂಕ: 05.08.2025 ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ಇವರಿಗೆ ತಿಳಿಸಿರುತ್ತಾರೆ. |
| ಇ) | ಅಲೆಮಾರಿ ಸಮುದಾಯದವರು ಅವರ ಸಾಂಪ್ರದಾಯಿಕ ಉದ್ಯೋಗಗಳು ಇಲ್ಲದೆ ತೀರ ಬಡತನದ ಜೀವನ ನಡೆಸುತ್ತಿರುವುದರಿಂದ ಮತ್ತು ಮನೆ ಕಟ್ಟಿಕೊಳ್ಳಲು ಜಾಗ ಹಾಗೂ ಹಣವಿಲ್ಲದ ಕಾರಣ ಅವರಿಗೆ ವಸತಿ ಹಂಚಿಕೆಯಲ್ಲಿ ಆದ್ಯತೆ ನೀಡಲಾಗುತ್ತಿದೆಯೇ; | ರಾಜೀವ್ ಗಾಂಧಿ ವಸತಿ ನಿಗಮದಿಂದ ನಿವೇಶನ ರಹಿತರಿಗೆ ನಿವೇಶನ ಕಲ್ಪಿಸಲು ಮುಖ್ಯ ಮಂತ್ರಿಗಳ ಗ್ರಾಮೀಣ ಮತ್ತು ನಗರ ನಿವೇಶನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಜಿಲ್ಲೆಗಳಲ್ಲಿ ವಸತಿಗೆ ಯೋಗ್ಯ ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಖಾಸಗಿ ಜಮೀನನ್ನು ಖರೀದಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಜಮೀನು ಖರೀದಿ ಸಮಿತಿ ಇದ್ದು, ಸದರಿ ಸಮಿತಿ ಮೂಲಕ ನಿವೇಶನಕ್ಕೆ ಯೋಗ್ಯವಾದ ಖಾಸಗಿ ಜಮೀನನ್ನು ಗುರುತಿಸಿ ನಿಗಮಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಲ್ಲಿ ಜಮೀನು ಖರೀದಿಸಲು ನಿಗಮದಿಂದ ಅನುದಾನ ಬಿಡುಗಡೆ ಮಾಡಲಾಗುತ್ತದೆ.<br><br>ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸಲು ರಾಜೀವ್ ಗಾಂಧಿ ವಸತಿ ನಿಗಮದಿಂದ ದೇವರಾಜ ಅರಸು ವಸತಿ ಯೋಜನೆಯಡಿ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಾಗೂ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2010-11ನೇ ಸಾಲಿನಿಂದ ಒಟ್ಟು **53,755** ಮನೆಗಳನ್ನು ಮಂಜೂರು ಮಾಡಲಾಗಿದೆ.<br><br>ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸದರಿ ಅಲೆಮಾರಿ ಸಮುದಾಯದ ವಸತಿ ರಹಿತ ಫಲಾನುಭವಿಗಳ ಸರ್ವೆ ನಡೆಸಿ ಅವರಿಗೆ ಆದ್ಯತೆ ಮೇಲೆ ವಸತಿ ಸೌಲಭ್ಯ ನೀಡಲು 2025-26ನೇ ಸಾಲಿನಲ್ಲಿ ಹೆಚ್ಚುವರಿ ಗುರಿ ನೀಡಲು ಸಮಾಜ ಕಲ್ಯಾಣ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ವ್ಯವಸ್ಥಾಪಕರು ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ:ಕ.ಪ.ಜಾ/ಪ/ಪಂ.ಅಅನಿ/ವಿ.ಪ,ಪ್ರಶ್ನಾವಳಿ:2025-26/1847, ದಿನಾಂಕ:04.08.2025(4)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ಇವರಿಗೆ ತಿಳಿಸಿರುತ್ತಾರೆ. |

| | | |
|---|---|---|
| ಈ) | ಅಲೆಮಾರಿ ಸಮುದಾಯದವರ ವಸತಿ ಸಮಸ್ಯೆಯನ್ನು ಬಗೆಹರಿಸಿ ಇವರಿಗೆ ಇಷ್ಟು ವಸತಿಗಳು ಎಂದು ಮೀಸಲಿಟ್ಟು ಅವರಿಗೆ ಆದ್ಯತೆ ನೀಡಲು ಸರ್ಕಾರ ನೀತಿ ನಿರೂಪಿಸಿ ತಕ್ಷಣವೇ ಕ್ರಮ ಕೈಗೊಳ್ಳುವುದೇ?. | ಅಲೆಮಾರಿ ಸಮುದಾಯದ ಫಲಾನುಭವಿಗಳನ್ನು ಒಳಗೊಂಡಂತೆ 14 ವಿಶೇಷ ವರ್ಗಕ್ಕೆ ಸೇರಿದ ಫಲಾನುಭವಿಗಳಿಗೆ ವಸತಿ ಸೌಕರ್ಯ ಕಲ್ಪಿಸಲು ರಾಜೀವ್ ಗಾಂಧಿ ವಸತಿ ನಿಗಮದಲ್ಲಿ ದೇವರಾಜ ಅರಸು ವಸತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಯಡಿ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನಕ್ಕೆ ಅನುಗುಣವಾಗಿ ಗುರಿ ನಿಗಧಿಪಡಿಸಿ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. ಅಲ್ಲದೇ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದಿನ ಶ್ರೇಣಿಗಳಡಿ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಬಿಡುಗಡೆ ಮಾಡಲಾದ ಅನುದಾನದಲ್ಲಿ ಬಾಕಿ ಇರುವ ಅನುದಾನಕ್ಕೆ ಅನುಗುಣವಾಗಿ 2022-23ನೇ ಸಾಲಿನಲ್ಲಿ ಒಟ್ಟು 6141 ಮನೆಗಳ ಜಿಲ್ಲಾವಾರು ಗುರಿ ನಿಗಧಿಪಡಿಸಲಾಗಿರುತ್ತದೆ. ಫಲಾನುಭವಿಗಳ ಆಯ್ಕೆ ಮತ್ತು ಅನುಮೋದನೆಯನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡಲಾಗುತ್ತಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪತ್ರ ಸಂಖ್ಯೆ:ಹಿಂವಕಇ/ಸ-09/ವಿಪ/ಸಿಆರ್-01/2025-26, ದಿನಾಂಕ:05.08.2025ರಲ್ಲಿ ತಿಳಿಸಲಾಗಿರುತ್ತದೆ.<br><br>ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ವಸತಿ ರಹಿತ ಅಲೆಮಾರಿ ಸಮುದಾಯದ ಫಲಾನುಭವಿಗಳ ಸರ್ವೆ ನಡೆಸಿ ಅವರಿಗೆ ಪ್ರತ್ಯೇಕವಾಗಿ ಗುರಿ ನಿಗಧಿಪಡಿಸಿ ವಸತಿ ಸೌಲಭ್ಯ ನೀಡಲು ಕ್ರಮವಹಿಸಲಾಗುತ್ತಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ. ಇವರ ಪತ್ರ ಸಂಖ್ಯೆ:ಕ.ಪ.ಜಾ/ಪ/ಪಂ.ಅಅನಿ/ವಿ.ಪ,ಪ್ರಶ್ನಾವಳಿ:2025-26/1847, ದಿನಾಂಕ:04.08.2025(4)ರಲ್ಲಿ ತಿಳಿಸಲಾಗಿರುತ್ತದೆ.<br><br>ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸದರಿ ಅಲೆಮಾರಿ ಸಮುದಾಯದವರಿಗೆ 11,525 ಮನೆಗಳ ಗುರಿಯನ್ನು ಮೀಸಲಿಟ್ಟು, ಆದ್ಯತೆ ಮೇರೆಗೆ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. 2017-18, 2020-21 ಮತ್ತು 2021-22ನೇ ಸಾಲಿನಲ್ಲಿ 6,016 ಫಲಾನುಭವಿಗಳನ್ನು ಆಯ್ಕೆಗೊಳಿಸಿ ವಸತಿ ಸೌಕರ್ಯ ಕಲ್ಪಿಸಲಾಗಿದೆ. |

ಸಂಖ್ಯೆ: ವಇ 311 ಹೆಚ್‌ಎಂ 2025

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು